ಕರ್ನಾಟಕ ಸರ್ಕಾರ

ಸಂ: ಟಿಡಿ 68 ಟಿಡಿಒ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:03.02.2024.

## ಅಧಿಸೂಚನೆ

ಮೋಟಾರು ವಾಹನಗಳ ಅಧಿನಿಯಮ, 1988 ರ (ಕೇಂದ್ರ ಅಧಿನಿಯಮ ಸಂಖ್ಯೆ 59/1988) ಕಲಂ 67 ರ ಉಪಕಲಂ (1)(i)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ರಾಜ್ಯದಲ್ಲಿ (ಬೆಂಗಳೂರು ನಗರ ವ್ಯಾಪ್ತಿಯನ್ನು ಸಹ ಒಳಗೊಂಡಂತೆ) ಆಚರಣೆ ಮಾಡುವ ಎಲ್ಲಾ ಟ್ಯಾಕ್ಸಿ, ಸಿಟಿ ಟ್ಯಾಕ್ಸಿ ಹಾಗೂ ಇನ್ನಿತರೆ ಟ್ಯಾಕ್ಸಿಗಳಿಗೆ ದರ ಮತ್ತು ಸಾಗಾಣಿಕೆ ದರಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ ಟಿಡಿ 68 ಟಿಡಿಒ 2019 ದಿನಾಂಕ:01.02.2021 ರಲ್ಲಿ ನಿಗದಿಪಡಿಸಿ ಕರ್ನಾಟಕ ರಾಜ್ಯ ಸಾರಿಗೆ ಪ್ರಾಧಿಕಾರಕ್ಕೆ ಮತ್ತು ಪ್ರಾದೇಶಿಕ ಸಾರಿಗೆ ಪ್ರಾಧಿಕಾರಗಳಿಗೆ ನಿರ್ದೇಶನ ನೀಡಲಾಗಿತ್ತು.

ಮೋಟಾರು ವಾಹನಗಳ ಅಧಿನಿಯಮ, 1988 ರ (ಕೇಂದ್ರ ಅಧಿನಿಯಮ ಸಂಖ್ಯೆ 59/1988) ಕಲಂ 67 ರ ಉಪಕಲಂ (1)(ಎ) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ ಟಿಡಿ 68 ಟಿಡಿಒ 2019 ದಿನಾಂಕ:01.04.2021 ರಲ್ಲಿ ಪ್ರಯಾಣ ದರಗಳನ್ನು ನಿರ್ಧರಿಸಲು ವಾಹನಗಳ ಮೌಲ್ಯವನ್ನು ಆಧರಿಸಿ ವಾಹನಗಳನ್ನು 'ಎ', 'ಬಿ', 'ಸಿ' ಮತ್ತು 'ಡಿ' ಗಳೆಂದು ವರ್ಗೀಕರಿಸಿ ಕರ್ನಾಟಕ ರಾಜ್ಯಾದ್ಯಂತ (ಬೆಂಗಳೂರು ನಗರ ವ್ಯಾಪ್ತಿಯನ್ನೂ ಸಹ ಒಳಗೊಂಡಂತೆ) ಅಗ್ರಿಗೇಟರ್ಸ್ ನಿಯಮದಡಿಯಲ್ಲಿ ಕಾರ್ಯಾಚರಿಸುತ್ತಿರುವ ವಿವಿಧ ಮಾದರಿಯ ಟ್ಯಾಕ್ಸಿಗಳಿಗೆ ದರಗಳನ್ನು ನಿಗದಿಪಡಿಸಿ ಕರ್ನಾಟಕ ರಾಜ್ಯ ಸಾರಿಗೆ ಪ್ರಾಧಿಕಾರಕ್ಕೆ ಮತ್ತು ಪ್ರಾದೇಶಿಕ ಸಾರಿಗೆ ಪ್ರಾಧಿಕಾರಗಳಿಗೆ ನಿರ್ದೇಶನ ನೀಡಲಾಗಿತ್ತು.

ಈ ಮೇಲ್ಕಂಡ ಅಧಿಸೂಚನೆಗಳಲ್ಲಿ, ಕನಿಷ್ಠ ಮತ್ತು ಗರಿಷ್ಠ ಪ್ರಯಾಣ ದರಗಳನ್ನು ನಿಗದಿ ಮಾಡಿರುವುದರಿಂದ ಸಿಟಿ ಟ್ಯಾಕ್ಸಿಗಳ ಪ್ರಯಾಣ ದರ ಮತ್ತು ಅಗ್ರಿಗೇಟರ್ಸ್ ನಿಯಮಗಳಡಿ ಕಾರ್ಯಾಚರಿಸುತ್ತಿರುವ ವಿವಿಧ ಮಾದರಿಯ ಟ್ಯಾಕ್ಸಿಗಳ ದರಗಳನ್ನು ಒಂದೇ ಮಾದರಿಯಲ್ಲಿ ನಿಗದಿ ಮಾಡುವ ಬಗ್ಗೆ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರು ಸಲ್ಲಿಸಿರುವ ದಿನಾಂಕ 26.12.2023ರ ಪ್ರಸ್ತಾವನೆಯಂತೆ, ಸಿಟಿ ಟ್ಯಾಕ್ಸಿಗಳ ಪ್ರಯಾಣ ದರ ಮತ್ತು ಅಗ್ರಿಗೇಟರ್ ನಿಯಮಗಳಡಿ ಕಾರ್ಯಾಚರಿಸುತ್ತಿರುವ ವಿವಿಧ ಮಾದರಿಯ ಟ್ಯಾಕ್ಸಿಗಳ ದರಗಳನ್ನು ಒಂದೇ ಮಾದರಿಯಲ್ಲಿ ನಿಗಧಿಪಡಿಸುವುದು ಅಗತ್ಯವೆಂದು ಕರ್ನಾಟಕ ಸರ್ಕಾರವು ತೀರ್ಮಾನಿಸಿ, ಮೋಟಾರು ವಾಹನಗಳ ಅಧಿನಿಯಮ, 1988 ರ (ಕೇಂದ್ರ ಅಧಿನಿಯಮ ಸಂಖ್ಯೆ 59/1988) ಕಲಂ 67 ರ ಉಪಕಲಂ (1) ಮತ್ತು, ಉಪಕಲಂ (1)(ಎ) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರದ ದಿನಾಂಕ:01.02.2021 ಮತ್ತು ದಿನಾಂಕ:01.04.2021 ರ ಅಧಿಸೂಚನೆಗಳನ್ನು ಮಾರ್ಪಡಿಸಿ, ಕರ್ನಾಟಕ ರಾಜ್ಯ ಸಾರಿಗೆ ಪ್ರಾಧಿಕಾರಕ್ಕೆ ಮತ್ತು ಪ್ರಾದೇಶಿಕ ಸಾರಿಗೆ ಪ್ರಾಧಿಕಾರಗಳಿಗೆ ಈ ಕೆಳಕಂಡಂತೆ ನಿರ್ದೇಶನ ನೀಡಲಾಗಿದೆ.

## ನಿರ್ದೇಶನಗಳು

ಕರ್ನಾಟಕ ರಾಜ್ಯದಲ್ಲಿ (ಬೆಂಗಳೂರು ನಗರ ವ್ಯಾಪ್ತಿಯನ್ನು ಸಹ ಒಳಗೊಂಡಂತೆ) ಆಚರಣೆ ಮಾಡುವ ಎಲ್ಲಾ ಟ್ಯಾಕ್ಸಿ, ಸಿಟಿ ಟ್ಯಾಕ್ಸಿ ಇನ್ನಿತರೆ ಟ್ಯಾಕ್ಸಿ(ಮೋಟಾರು ಕ್ಯಾಬ್) ಗಳ ಹಾಗೂ ಅಗ್ರಿಗೇಟರ್ಸ್ ನಿಯಮಗಳಡಿ ಕಾರ್ಯಾಚರಿಸುತ್ತಿರುವ ವಿವಿಧ ಮಾದರಿಯ ಟ್ಯಾಕ್ಸಿಗಳ ಪ್ರಯಾಣ ದರ ಮತ್ತು ಸಾಗಾಣಿಕೆ ದರಗಳನ್ನು ಈ ಕೆಳಕಂಡಂತೆ ಕೂಡಲೇ ಜಾರಿಗೆ ಬರುವಂತೆ ನಿಗಧಿಪಡಿಸಲು ಕರ್ನಾಟಕ ರಾಜ್ಯ ಸಾರಿಗೆ ಪ್ರಾಧಿಕಾರಕ್ಕೆ ಮತ್ತು ಪ್ರಾದೇಶಿಕ ಸಾರಿಗೆ ಪ್ರಾಧಿಕಾರಗಳಿಗೆ ಈ ಮೂಲಕ ನಿರ್ದೇಶಿಸಲಾಗಿದೆ.

--2

| ಕ್ರ. ಸಂ. | ವಾಹನಗಳ ಮಾದರಿ | | ನಿಗದಿತ ದರ (ಕನಿಷ್ಠ 4 ಕಿ.ಮೀ. ವರೆಗೆ | ಪ್ರತಿ ಕಿ.ಮೀ.ಗೆ |
|---|---|---|---|---|
| 1 | ವಾಹನದ ಮೌಲ್ಯ | 10,00,000/- ಕ್ಕಿಂತ ಕಡಿಮೆ | ರೂ.100.00 | ರೂ.24.00 |
| | | 10,00,000/- ರಿಂದ 15,00,000/- ದವರೆಗೆ | ರೂ.115.00 | ರೂ.28.00 |
| | | 15,00,000/- ಕ್ಕಿಂತ ಹೆಚ್ಚು | ರೂ.130.00 | ರೂ.32.00 |

1. ಲಗೇಜ್ ದರಗಳು ಮೊದಲಿನ 120 ಕೆ.ಜಿ. ವರೆಗೆ ಉಚಿತ (ಸೂಟ್ ಕೇಸ್, ಬೆಡ್ಡಿಂಗ್ ಇತ್ಯಾದಿ ವೈಯಕ್ತಿಕ ಲಗೇಜುಗಳು) ನಂತರದ ಪ್ರತಿ 30 ಕಿ.ಗ್ರಾಂ. ಗೆ ಅಥವಾ ಅದರ ಭಾಗಕ್ಕೆ ರೂ.7.00.
2. ಕಾಯುವಿಕೆಯ ದರಗಳು ಮೊದಲ 5 ನಿಮಿಷಗಳವರೆಗೆ ಉಚಿತ, ನಂತರದ ಪ್ರತಿ 1 ನಿಮಿಷಕ್ಕೆ ರೂ.1.00.
3. ರಾತ್ರಿ 12.00 ಗಂಟೆಯಿಂದ ಬೆಳಗಿನ 6.00 ಗಂಟೆಯವರೆಗೆ ಸಂಚರಿಸುವ ಟ್ಯಾಕ್ಸಿಗಳಿಗೆ ಪ್ರಯಾಣ ದರದ ಮೇಲೆ ಶೇ.10 ರಷ್ಟು ಹೆಚ್ಚುವರಿ ದರ.
4. ಸಿಟಿ ಟ್ಯಾಕ್ಸಿಯವರು / ಪ್ರವರ್ತಕರು , ಅಗ್ರಿಗೇಟರ್‌ಗಳು ಅನ್ವಯಿಸುವಂತಹ ಜಿ.ಎಸ್.ಟಿ. ಮತ್ತು ಟೋಲ್ ಶುಲ್ಕವನ್ನು ಪ್ರಯಾಣಿಕರಿಂದ ವಸೂಲಿ ಮಾಡಬಹುದಾಗಿದೆ.
5. ಸಮಯದ ಆಧಾರದಲ್ಲಿ ದರಗಳನ್ನು ವಸೂಲಿ ಮಾಡಬಾರದು. ಸರ್ಕಾರದಿಂದ ಕಿ.ಮೀ. ಆಧಾರದಲ್ಲಿ ಅಧಿಸೂಚನೆಯಲ್ಲಿ ನಿಗದಿಪಡಿಸಿರುವ ದರಗಳನ್ನು ಮಾತ್ರ ಪ್ರಯಾಣಿಕರಿಂದ ವಸೂಲಿ ಮಾಡುವುದು.
6. ಸರ್ಕಾರದಿಂದ ಕಿ.ಮೀ. ಆಧಾರದಲ್ಲಿ ಅಧಿಸೂಚನೆಯಲ್ಲಿ ನಿಗದಿಪಡಿಸಿರುವ ದರಗಳನ್ನು ಹೊರತುಪಡಿಸಿ ಅನಧಿಕೃತವಾಗಿ ಯಾವುದೇ ದರಗಳನ್ನು ಪ್ರಯಾಣಿಕರಿಂದ ಪಡೆಯತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Pushpa v.s.
(ಪುಷ್ಪ ವಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) / (ಇ & ಆರ್‌ಎಸ್‌ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398 ಹಾಗೂ ಪ್ರಧಾನ ಮಹಾಲೇಖಪಾಲರು (ಎ &ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5359, ಬೆಂಗಳೂರು-560001.
2. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಟಿ.ಟಿ.ಎಂ.ಸಿ. ಸಂಕೀರ್ಣ, 1ನೇ ಮಹಡಿ, 'ಎ' ಬ್ಲಾಕ್, ಶಾಂತಿನಗರ, ಬೆಂಗಳೂರು-27.
3. ಎಲ್ಲಾ ಅಪರ ಸಾರಿಗೆ ಆಯುಕ್ತರು/ ಜಂಟಿ ಸಾರಿಗೆ ಆಯುಕ್ತರು / ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು / ಪ್ರಾದೇಶಿಕ ಸಾರಿಗೆ ಅಧಿಕಾರಿಗಳು / ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು:- ಸಾರಿಗೆ ಆಯುಕ್ತರ ಮುಖಾಂತರ.

**ಪ್ರತಿ:**

1. ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
3. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು / ಒ.ಡಿ.ಜಿ.ಸಿ.,